# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಹಾವೇರಿ ಜಿಲ್ಲೆ, ಹಾವೇರಿ

ನಂ.ಜಿನಕೋಹಾ/ಸಿಬ್ಬಂದಿ/ಸಿಆರ್-220/2025-26 ದಿನಾಂಕ: 31/03/2026

## ಪತ್ರಿಕಾ ಪ್ರಕಟಣೆ

ಹಾವೇರಿ ಜಿಲ್ಲೆಯ ನಗರಸಭೆಗಳಲ್ಲಿ ಖಾಲಿ ಇರುವ ಈ ಕೆಳಗಿನಂತೆ ನೇರ ಪಾವತಿ ಪೌರಕಾರ್ಮಿಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಹಾವೇರಿ ಜಿಲ್ಲೆಯ ಹಾವೇರಿ ಮತ್ತು ರಾಣೇಬೆನ್ನೂರು ನಗರಸಭೆಗಳಲ್ಲಿ ದಿನಾಂಕ: 30/04/2026 ರೊಳಗಾಗಿ ದಾಖಲಾತಿಗಳೊಂದಿಗೆ ಸಲ್ಲಿಸತಕ್ಕದ್ದು.

| ಕ್ರ.ಸಂ. | ಹುದ್ದೆಯ ಹೆಸರು | ಒಟ್ಟು ಹುದ್ದೆಗಳು | ಕನಿಷ್ಠ ವಿದ್ಯಾರ್ಹತೆ/ಅರ್ಹತೆ |
|---|---|---|---|
| 1 | ನೇರಪಾವತಿ ಪೌರಕಾರ್ಮಿಕ | 73 | 1. ವಿದ್ಯಾರ್ಹತೆ ಅನ್ವಯಿಸುವುದಿಲ್ಲ.<br>2. ಕನ್ನಡ ಮಾತನಾಡಲು ಗೊತ್ತಿರಬೇಕು.<br>3. ಹಾವೇರಿ ಜಿಲ್ಲೆಯ ಹಾವೇರಿ ಮತ್ತು ರಾಣೇಬೆನ್ನೂರು ನಗರಸಭೆಯಲ್ಲಿ ಈ ಹಿಂದೆ ಹೊರಗುತ್ತಿಗೆ/ದಿನಗೂಲಿ/ಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಪೌರಕಾರ್ಮಿಕ/ಲೋಡರ್ಸ್/ಯು.ಜಿ.ಡಿ ಹೆಲ್ಪರ್ಸ್/ಕ್ಲೀನರ್ಸ್ ಹಾಗೂ ಹೆಲ್ಪರ್ಸ್‌ಗಳಾಗಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಕಾರ್ಯನಿರ್ವಹಿಸಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.<br>4. ಹಾವೇರಿ ಜಿಲ್ಲೆಯ ಹಾವೇರಿ ಮತ್ತು ರಾಣೇಬೆನ್ನೂರು ನಗರಸಭೆಯಲ್ಲಿ ಹೊರಗುತ್ತಿಗೆ/ದಿನಗೂಲಿ/ಗುತ್ತಿಗೆ ಆಧಾರದ ಕಾರ್ಯನಿರ್ವಹಿಸುವಾಗ ಕೋವಿಡ್-19ರ ಸಾಂಕ್ರಾಮಿಕ ರೋಗಕ್ಕೆ ತುತ್ತಾಗಿ ಅಥವಾ ಇತರೇ ಕಾರಣಗಳಿಂದ ಮರಣ ಹೊಂದಿದ ಪೌರಕಾರ್ಮಿಕರ ಕುಟುಂಬದ ಒಬ್ಬ ಸದಸ್ಯರು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.<br>5. ಹಾವೇರಿ ಜಿಲ್ಲೆಯ ಹಾವೇರಿ ಮತ್ತು ರಾಣೇಬೆನ್ನೂರು ನಗರಸಭೆಯಲ್ಲಿ ಮ್ಯಾನ್ಯುವೆಲ್ ಸ್ಕ್ಯಾವೆಂಜರ್ಸ್ ಅಧಿನಿಯಮದಡಿ ಗುರುತಿಸಲ್ಪಟ್ಟ ಸಂತ್ರಸ್ಥರಗಳಿಗೆ ಅಥವಾ ಅವರ ಕುಟುಂಬದ ಸದಸ್ಯರಿಗೆ (ಗಂಡ,ಹೆಂಡತಿ, ಮಗ,ಮಗಳು) ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.<br>6. ಮೇಲ್ಕಾಣಿಸಿದ ವರ್ಗದವರಿಗೆ ಆದ್ಯತೆ ನೀಡಿದ ನಂತರ ಬಾಕಿ ಉಳಿಯುವ ಖಾಲಿ ಹುದ್ದೆಗಳನ್ನು ಇತರೇ ವರ್ಗದವರು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.<br>7. ಅರ್ಜಿ ಸಲ್ಲಿಸಲು ಸರ್ಕಾರದ ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ 18 ವರ್ಷ ಪೂರ್ಣಗೊಂಡಿದ್ದು, ಗರಿಷ್ಠ ವಯೋಮಿತಿ 50 ವರ್ಷ. |

**1. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕಾಲಮಿತಿ.**

| ವಿವರ | ದಿನಾಂಕ | ಅರ್ಜಿ ನಮೂನೆ ಪಡೆಯುವ ವಿಳಾಸ |
|---|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ | 01/04/2026 | ಹಾವೇರಿ ಜಿಲ್ಲೆಯ ನಗರಸಭೆ ಹಾವೇರಿ/ರಾಣೇಬೆನ್ನೂರು |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 30/04/2026 | |

**ಖಾಲಿ ಇರುವ ನೇರಪಾವತಿ ಪೌರಕಾರ್ಮಿಕರ ಹುದ್ದೆಗಳ ವಿವರ**

| ಕ್ರಸಂ | ನಗರ ಸ್ಥಳೀಯ ಸಂಸ್ಥೆಗಳ ಹೆಸರು | ಹುದ್ದೆಯ ಹೆಸರು | ಹಂಚಿಕೆ ಮಾಡಲಾದ ಖಾಲಿ ಹುದ್ದೆಗಳ ಸಂಖ್ಯೆ | | |
|---|---|---|---|---|---|
| | | | ನೇರಪಾವತಿ ಪೌರಕಾರ್ಮಿಕರ ಖಾಲಿ ಹುದ್ದೆಗಳು | ಮ್ಯಾನ್ಯುವೆಲ್ ಸ್ಕ್ಯಾವೆಂಜರ್ ಅಧಿನಿಯಮದಡಿ (ಶೇ.10 ರಷ್ಟು ಕಾಯ್ದಿರಿಸಿದ ಖಾಲಿ ಹುದ್ದೆಗಳ ಸಂಖ್ಯೆ | ಒಟ್ಟು ಖಾಲಿ ಇರುವ ನೇರಪಾವತಿ ಹುದ್ದೆಗಳ ಸಂಖ್ಯೆ |
| 1 | ನಗರಸಭೆ ಹಾವೇರಿ | ನೇರಪಾವತಿ ಪೌರಕಾರ್ಮಿಕ | 40 | 04 | 36 |
| 2 | ನಗರಸಭೆ ರಾಣೇಬೆನ್ನೂರು | ನೇರಪಾವತಿ ಪೌರಕಾರ್ಮಿಕ | 33 | 03 | 30 |
| ಒಟ್ಟು | | | 73 | 07 | 66 |

1. ಹೆಚ್ಚಿನ ಮಾಹಿತಿ ಹಾಗೂ ವಿವರವಾದ ಅಧಿಸೂಚನೆಯನ್ನು ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಛೇರಿ, ಹಾವೇರಿ ಜಿಲ್ಲೆಯ ಹಾವೇರಿ ಮತ್ತು ರಾಣೇಬೆನ್ನೂರು ನಗರಸಭೆಗಳಲ್ಲಿ ಮಾಹಿತಿಯನ್ನು ಪಡೆಯಬಹುದು.
2. ಅರ್ಜಿ ನಮೂನೆ ಪಡೆಯುವ ವಿಳಾಸ ಹಾವೇರಿ ಜಿಲ್ಲೆಯ ಹಾವೇರಿ ಮತ್ತು ರಾಣೇಬೆನ್ನೂರು ನಗರಸಭೆಗಳಲ್ಲಿ
3. ಅಭ್ಯರ್ಥಿಗಳು ಅರ್ಜಿ ನಮೂನೆಯಲ್ಲಿ ತಿಳಿಸಿರುವ ಎಲ್ಲ ಮಾಹಿತಿಗಳನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು ಹಾಗೂ ಅದಕ್ಕೆ ಪೂರಕವಾದ ದಾಖಲೆಗಳ ಪ್ರತಿಗಳನ್ನು ಸ್ವಯಂ ದೃಢೀಕರಿಸಿ ನಿಗದಿತ ಅವಧಿಯೊಳಗೆ ಸಂಬಂಧಿಸಿದ ನಗರಸಭೆಯ ಪೌರಾಯುಕ್ತರು ರವರ ಕಛೇರಿಯಲ್ಲಿ ಸಲ್ಲಿಸತಕ್ಕದ್ದು.
4. ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಭರ್ತಿ ಮಾಡಿ ಅಧ್ಯಕ್ಷರು ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು ಹಾವೇರಿ ರವರ ಹೆಸರಿನಲ್ಲಿ ನಗರಸಭೆ ಹಾವೇರಿ ಮತ್ತು ನಗರಸಭೆ ರಾಣೇಬೆನ್ನೂರು ಪೌರಾಯುಕ್ತರ ಮೂಲಕ ಸಲ್ಲಿಸುವುದು ನೇರವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
5. ಭರ್ತಿ ಮಾಡಿರುವ ಅರ್ಜಿಗಳನ್ನು ದಿನಾಂಕ: 30/04/2026 ರೊಳಗಾಗಿ ಪೌರಾಯುಕ್ತರು ಹಾವೇರಿ ಮತ್ತು ರಾಣೇಬೆನ್ನೂರು ನಗರಸಭೆಯಲ್ಲಿ ಅರ್ಜಿಗಳನ್ನು ಪಡೆದು ಪರಿಶೀಲಿಸಿ ದೃಢೀಕರಿಸಿ ಜಿಲ್ಲಾ ನಗರಾಭಿವೃದ್ಧಿ ಕೋಶಕ್ಕೆ ಸಲ್ಲಿಸತಕ್ಕದ್ದು.
6. ಈ ನೇಮಕಾತಿಯು ಸರ್ಕಾರದ/ಪೌರಾಡಳಿತ ನಿರ್ದೇಶನಾಲಯದಿಂದ ಕಾಲ ಕಾಲಕ್ಕೆ ಹೊರಡಿಸುವ ಆದೇಶ/ಸುತ್ತೋಲೆಯ ಷರತ್ತುಗೊಳಪಟ್ಟಿದೆ.

ಸಹಿ/- ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ.

dipr/hvr/dipo/15/2026-25